# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 382

ಸದಸ್ಯರ ಹೆಸರು : ಶ್ರೀ ಕಿಶೋರ್ ಕುಮಾರ್ ಪುತ್ತೂರು

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 13.08.2025

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನೂತನವಾಗಿ ರಚನೆಯಾದ ಕಡಬ ತಾಲ್ಲೂಕಿನಲ್ಲಿ ಕೆಎಸ್ಆರ್‌ಟಿಸಿ ಬಸ್ ಡಿಪೋ ಪ್ರಾರಂಭಿಸುವಂತೆ ಸಾರ್ವಜನಿಕರು ಬೇಡಿಕೆ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಸರ್ಕಾರದ ಗಮನಕ್ಕೆ ಬಂದಿದೆ.<br><br>ಕಡಬ ತಾಲ್ಲೂಕಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ಘಟಕ ನಿರ್ಮಿಸಲು ಕಡಪ ತಾಲ್ಲೂಕಿನ ಕಡಬ ಹೋಬಳಿ ಕುಟ್ರುಪಾಡಿ ಗ್ರಾಮದ ಸರ್ವೆ ನಂಬರ್ 40ರಲ್ಲಿ ಮುಖ್ಯ ರಸ್ತೆಯಲ್ಲಿರುವ 4.59 ಎಕರೆ ಸರ್ಕಾರಿ ಜಾಗವನ್ನು ಒದಗಿಸುವಂತೆ ದಿನಾಂಕ: 18.06.2025 ರಂದು ಕಂದಾಯ ಇಲಾಖೆಗೆ ಪತ್ರ ಬರೆಯಲಾಗಿದೆ.<br><br>ಸದರಿ ನಿವೇಶನದಲ್ಲಿಯೇ ಮುಖ್ಯ ರಸ್ತೆಗೆ ಹೊಂದಿಕೊಂಡಂತೆ ಬಸ್ ತಂಗುದಾಣವನ್ನು ನಿರ್ಮಿಸುವುದು ಸೂಕ್ತವೆಂದು ಯೋಜಿಸಲಾಗಿದೆ. ಕಂದಾಯ ಇಲಾಖೆಯಿಂದ ನಿವೇಶನ ದೊರೆತ ನಂತರ ಹಾಗೂ ಅನುದಾನದ ಲಭ್ಯತೆಗನುಗುಣವಾಗಿ ಅವಶ್ಯಕತೆಯನ್ನಾಧರಿಸಿ ಆದ್ಯತೆಯ ಮೇರೆಗೆ ಬಸ್ ನಿಲ್ದಾಣ ಮತ್ತು ತಂಗುದಾಣ ನಿರ್ಮಿಸಲು ಪರಿಶೀಲಿಸಲಾಗುವುದು. |
| ಆ) | ತಾಲ್ಲೂಕು ಕೇಂದ್ರವಾದ ಕಡಬ ಪಟ್ಟಣದಲ್ಲಿ ಈವರೆಗೂ ಸುಸಜ್ಜಿತ ಬಸ್ಸು ತಂಗುದಾಣ ನಿರ್ಮಿಸದಿರಲು ಕಾರಣವೇನು; | |
| ಇ) | ಪ್ರಸಕ್ತ ವರ್ಷದಲ್ಲಿ ಕಡಬದಲ್ಲಿ ಬಸ್ಸು ತಂಗುದಾಣ ನಿರ್ಮಿಸಲು ಕ್ರಮ ವಹಿಸಲಾಗಿದೆಯೇ; ಕ್ರಮ ವಹಿಸಿದ್ದಲ್ಲಿ ಸಂಪೂರ್ಣ ಮಾಹಿತಿ ನೀಡುವುದು. ಕ್ರಮ ವಹಿಸಿಲ್ಲವಾದಲ್ಲಿ ಕಡಬದಲ್ಲಿ ಬಸ್ಸು ನಿಲ್ದಾಣ ನಿರ್ಮಾಣಕ್ಕೆ ಯಾವಾಗ ಕ್ರಮ ಕೈಗೊಳ್ಳಲಾಗುವುದು? | |

ಸಂಖ್ಯೆ: ಟಿಡಿ 150 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)

ಸಾರಿಗೆ ಮತ್ತು ಮುಜರಾಯಿ ಸಚಿವರು